ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ    ದಿನಾಂಕ : DATE : 23/12/2019

## ಅಮಾನತು ತೆರವಿಗೆ ಮೂರ್ತಿ ಮನವಿ

**ಬೆಂಗಳೂರು:** ಅಮಾನತು ಆದೇಶ ತೆರವುಗೊಳಿಸಿ ಕರ್ತವ್ಯಕ್ಕೆ ಮರು ನೇಮಕ ಮಾಡುವಂತೆ ವಿಧಾನಸಭೆ ಸಚಿವಾಲಯದ ವಿಶೇಷ ಮಂಡಳಿಗೆ ವಿಧಾನಸಭೆ ಕಾರ್ಯದರ್ಶಿ ಸ್ಥಾನದಿಂದ ಅಮಾನತುಗೊಂಡಿರುವ ಎಸ್.ಮೂರ್ತಿ ಮನವಿ ಸಲ್ಲಿಸಿದ್ದಾರೆ.

''2018ರ ಡಿಸೆಂಬರ್ 27ರಂದು ನನ್ನನ್ನು ಸೇವೆಯಿಂದ ಅಮಾನತುಗೊಳಿಸಿದೆ. ಈ ಸಂಬಂಧ ಹೈಕೋರ್ಟ್‌ಗೆ ಸಲ್ಲಿಸಲಾಗಿದ್ದ ಮೇಲ್ಮನವಿ ವಜಾಗೊಂಡಿದೆ. ಈ ನಡುವೆ 2019ರ ಆಗಸ್ಟ್ 13ರಂದು ಸೇವೆಗೆ ಮರು ನೇಮಿಸುವಂತೆ ಮನವಿ ಮಾಡಿಕೊಂಡಿದ್ದೇನೆ. ಸಚಿವಾಲಯದಲ್ಲಿ 30 ವರ್ಷಗಳಿಗೂ ಹೆಚ್ಚು ಅವಧಿ ನಿಷ್ಠೆ ಪ್ರಾಮಾಣಿಕತೆ ಮತ್ತು ಪರಿಶ್ರಮದಿಂದ ಕೆಲಸ ಮಾಡಿದ್ದೇನೆ. ಇದನ್ನು ಪರಿಗಣಿಸಿ ಮರು ನೇಮಕ ಮಾಡಬೇಕು,'' ಎಂದು ಸಿಎಂ ಅಧ್ಯಕ್ಷತೆಯ ವಿಶೇಷ ಮಂಡಳಿಗೆ ಲಿಖಿತ ಮನವಿ ಕೊಟ್ಟಿದ್ದಾರೆ.